ಕರ್ನಾಟಕ ವಿಧಾನ ಪರಿಷತ್ತು

ಸದಸ್ಯರ ಹೆಸರು : ಶ್ರೀ ಪಿ.ಆರ್.ರಮೇಶ್ (ನಾಮನಿರ್ದೇಶನ ಹೊಂದಿದವರು)

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1371(1664)

ಉತ್ತರಿಸುವ ಸಚಿವರು : ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು.

ಉತ್ತರಿಸಬೇಕಾದ ದಿನಾಂಕ : 20.03.2020

ಕ್ರ ಸಂ	ಪ್ರಶ್ನೆ	ಉತ್ತರ
(ಅ)	ರಾಜ್ಯದಲ್ಲಿ ಎಷ್ಟು ಜವಳಿ ಪಾರ್ಕ್‌ಗಳನ್ನು ಸ್ಥಾಪಿಸಲಾಗಿದೆ; (ಜಿಲ್ಲಾವಾರು ವಿವರ ನೀಡುವುದು)	ರಾಜ್ಯದಲ್ಲಿ ಒಟ್ಟು 04 ಜವಳಿ ಪಾರ್ಕ್‌ಗಳನ್ನು ಸ್ಥಾಪಿಸಲಾಗಿರುತ್ತದೆ, ಅದರಲ್ಲಿ 02 ಪಾರ್ಕ್ ಗಳು ಕಾರ್ಯ ನಿರ್ವಹಿಸುತ್ತಿದ್ದು, 02 ಪಾರ್ಕ್ ಗಳು ಅನುಷ್ಠಾನದ ಹಂತದಲ್ಲಿರುತ್ತದೆ. 1. ದೊಡ್ಡಬಳ್ಳಾಪುರ ಇಂಟಿಗ್ರೇಟೆಡ್ ಟೆಕ್ಸ್ ಟೈಲ್ ಪಾರ್ಕ್ ಕೇಂದ್ರ ಸರ್ಕಾರದ ಎಸ್.ಐ.ಟಿ.ಪಿ.(Scheme for Integrated Textile Park) ಯೋಜನೆ ಯಡಿಯಲ್ಲಿ 48 ಎಕರೆ ಜಾಗದಲ್ಲಿ ನಿರ್ಮಾಣಗೊಂಡು ಕಾರ್ಯ ನಿರ್ವಹಿಸುತ್ತಿದೆ. 2. ಮೆ॥ ಬೈನರಿ ಅಪೆರಲ್ ಪಾರ್ಕ್ ರಾಜ್ಯ ಸರ್ಕಾರದ ನೂತನ ಜವಳಿ ನೀತಿ ಯೋಜನೆಯ ಗ್ರೀನ್ ಫೀಲ್ಡ್ ಟೆಕ್ಸ್ ಟೈಲ್ ಪಾರ್ಕ್ ಯೋಜನೆಯಡಿಯಲ್ಲಿ 25 ಎಕರೆ ಜಾಗದಲ್ಲಿ ನಿರ್ಮಾಣಗೊಂಡು ಕಾರ್ಯನಿರ್ವಹಿಸುತ್ತಿದೆ. 3. ಗುಲ್ಬರ್ಗಾ ಟೆಕ್ಸ್ ಟೈಲ್ ಪಾರ್ಕ್ ಸಹ ಕೇಂದ್ರ ಸರ್ಕಾರದ ಯೋಜನೆ ಯಾಗಿದ್ದು, ಎಸ್.ಐ.ಟಿ.ಪಿ. (Scheme for Integrated Textile Park) ಯೋಜನೆಯಡಿಯಲ್ಲಿ 50 ಎಕರೆ ಜಾಗದಲ್ಲಿ ಅನುಷ್ಠಾನದ ಹಂತದಲ್ಲಿರುತ್ತದೆ. 4. ಮೆ॥ ಕುರಣಿ ಟೆಕ್ಸ್ ಟೈಲ್ ಪಾರ್ಕ್ ಪ್ರೈ ಲಿ., ಬುಗಟೆ ಆಲೂರು ಗ್ರಾಮ, ಹುಕ್ಕೇರಿ ತಾ॥ ಬೆಳಗಾವಿ ಜಿಲ್ಲೆಯಲ್ಲಿ 18.16 ಎಕರೆ ಪ್ರದೇಶದಲ್ಲಿ ಯೋಜನೆಯು ಅನುಷ್ಠಾನದ ಹಂತದಲ್ಲಿದೆ.
(ಆ)	ಹೊಸದಾಗಿ ಜವಳಿ ಪಾರ್ಕ್ ನಿರ್ಮಿಸುವ ಯೋಜನೆ ಸರ್ಕಾರದ ಮುಂದಿದೆಯೇ;	ಹೌದು
(ಇ)	ಇದ್ದಲ್ಲಿ, ಎಷ್ಟು ಜವಳಿ ಪಾರ್ಕ್ ನಿರ್ಮಿಸುವ ಗುರಿಯನ್ನು ಹೊಂದಿದೆ; ಇದಕ್ಕೆ ಎಷ್ಟು ಅನುದಾನವನ್ನು ಮೀಸಲಿರಿಸ ಲಾಗಿದೆ? (ಸಂಪೂರ್ಣ ಮಾಹಿತಿ ನೀಡುವುದು)	2020-21ನೇ ಸಾಲಿನ ಆಯವ್ಯಯ ಘೋಷಣೆಯಲ್ಲಿ ಕಂಡಿಕೆ(167)ರಲ್ಲಿ ಹಾವೇರಿ ಜಿಲ್ಲೆಯ ಶಿಗ್ಗಾಂವಿಯಲ್ಲಿ ಮತ್ತು ಉಡುಪಿ ಜಿಲ್ಲೆಯ ಕಾರ್ಕಳದಲ್ಲಿ ನೂತನ ಜವಳಿ ಪಾರ್ಕ್ ನಿರ್ಮಿಸುವ ಬಗ್ಗೆ ಘೋಷಿಸಲಾಗಿದೆ. ಸದರಿ ಪಾರ್ಕ್ ಗಳ ಅಭಿವೃದ್ಧಿಗೆ ಅನುದಾನ ನೀಡಿರುವ ಕುರಿತು ಆರ್ಥಿಕ ಇಲಾಖೆಯು ಇನ್ನೂ Budget Advice ಅನ್ನು ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಗೆ ಒದಗಿಸಿರುವುದಿಲ್ಲ. ಅಲ್ಲದೇ, 2019-24ರ ನೂತನ ಜವಳಿ ಹಾಗೂ ಸಿದ್ದ ಉಡುಪು ನೀತಿಯ ಮಾರ್ಗಸೂಚಿಯನ್ವಯ ಆಸಕ್ತಿ ಹೊಂದಿರುವ ಉದ್ದಿಮೆದಾರರು ಪಾರ್ಕ್ ಸ್ಥಾಪನೆ ಮಾಡಲು ಮುಂದೆ ಬಂದಲ್ಲಿ, ಅಂತಹ ಉದ್ದಿಮೆದಾರರಿಗೆ ಸಾಮಾನ್ಯ ಮೂಲಭೂತ ಸೌಕರ್ಯ ಅಭಿವೃದ್ಧಿಪಡಿಸಲು ಅನುಕೂಲವಾಗುವಂತೆ ಈ ಕೆಳಕಂಡ ಸಹಾಯಧನವನ್ನು ನೀಡಲಾಗುವುದು:- ➢ ವೈಯಕ್ತಿಕ ಯೋಜನಾ ಮೊತ್ತದ ಶೇ.25ರಷ್ಟು ಅಥವಾ ರೂ.25.00 ಕೋಟಿಗಳವರೆಗೆ ಸಹಾಯಧನ. ➢ ಎಸ್.ಪಿ.ವಿ. ನೊಂದಾಯಿತ ಜವಳಿ ಘಟಕ ಸ್ಥಾಪನೆಗೆ ಯೋಜನಾ ಮೊತ್ತದ ಶೇ.40ರಷ್ಟು ಅಥವಾ ರೂ.40.00 ಕೋಟಿಗಳವರೆಗೆ ಸಹಾಯಧನ.

ಸಂ: ವಾಕೈ 87 JAKE 2020

(ಶ್ರೀಮಂತ ಬಾಳಾಸಾಹೇಬ ಪಾಟೀಲ್)
ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು